2) ಬಂದಿದೆ

3) ರಾಷ್ಟ್ರೀಯ ಮಲೇರಿಯಾ ಕಾರ್ಯಕ್ರಮ ಮಾರ್ಗಸೂಚಿಯಂತೆ ಸಮಸ್ಯೆಯಿಲ್ಲದ ಹಳ್ಳಿಗಳಿಗೆ ಮಲೇರಿಯಾ ರೋಗ ನಿಯಂತ್ರಣಕ್ಕಾಗಿ ಔಷಧಿ ಸಿಂಪಡಣೆ ಮಾಡಲು ಅವಕಾಶವಿರುವುದಿಲ್ಲ.

ಪ್ರಸ್ತುತ ಚಿಕ್ಕನಾಯಕನ ಹಳ್ಳಿ ತಾಲ್ಲೂಕಿನ 8 ಪ್ರಾಥಮಿಕ ಆರೋಗ್ಯ ಕೇಂದ್ರಗಳ ವ್ಯಾಪ್ತಿಯಲ್ಲಿ ಬರುವ 30 ಉಪ ಕೇಂದ್ರಗಳ ಸುಮಾರು 200 ಸಮಸ್ಯಾತ್ಮಕ ಹಳ್ಳಿಗಳಲ್ಲಿ 70,000 ಜನಸಂಖ್ಯೆಯ ಪ್ರದೇಶವನ್ನು ಐಕಾನ್ ಕೀಟನಾಶಕದಿಂದ ಸಿಂಪಡಣೆ ಮಾಡಲು ತುರ್ತು ಕ್ರಮ ಕೈಗೊಳ್ಳಲಾಗಿದೆ.

ಆಶ್ರಯ ಅಂಬೇಡ್ಕರ್ ಯೋಜನೆಯ ಫಲಾನುಭವಿಗಳಿಗೆ ಅಂತಿಮ ಬಿಲ್ ಪಾವತಿಸುವುದು

1055 (1151) ಶ್ರೀ ಸಿ.ಬಿ. ಸುರೇಶ್ ಬಾಬು (ಚಿಕ್ಕನಾಯಕನಹಳ್ಳಿ): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ವಿಧಾನ ಸಭಾಕ್ಷೇತ್ರದಲ್ಲಿ 1995-96, 1996-97, 1997-98 ಮತ್ತು 1998-99 ದ 1999-2000ನೇ ಸಾಲಿನ ಆಶ್ರಯ ಅಂಬೇಡ್ಕರ್ ಯೋಜನೆಯ ಕೆಲವು ಫಲಾನುಭವಿಗಳಿಗೆ ಅಂತಿಮ ಬಿಲ್ಲು ಪಾವತಿಯಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಇವರುಗಳಿಗೆ ಇನ್ನೆಷ್ಟು ದಿನಗಳಲ್ಲಿ ಅಂತಿಮ ಬಿಲ್ಲನ್ನು ಪಾವತಿಸಲು ಕ್ರಮ ಕೈಗೊಳ್ಳಲಾಗುವುದು;

ಇ) ಈ ರೀತಿಯ ವಿಳಂಬಕ್ಕೆ ಕಾರಣಗಳೇನು; ಇದರಿಂದ ಫಲಾನುಭವಿಗಳಿಗೆ ಆಗಿರುವ ತೊಂದರೆಗೆ ಪರಿಹಾರ ಏನು?

ಶ್ರೀ ಸಗೀರ್ ಅಹಮದ್ (ವಸತಿ ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಬೆಳಗಾವಿ ಜಿಲ್ಲೆ, ಹುಕ್ಕೇರಿ ತಾಲ್ಲೂಕು, ಅನುದಾನಿತ ಟಿಪ್ಪುಸುಲ್ತಾನ ಉರ್ದು ಪ್ರೌಢಶಾಲೆ

1056 (1162) ಶ್ರೀ ಉಮೇಶ್ ವಿಶ್ವನಾಥ್ ಕತ್ತಿ (ಹುಕ್ಕೇರಿ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ಟಿಪ್ಪುಸುಲ್ತಾನ ಅನುದಾನಿತ ಉರ್ದು ಪ್ರೌಢ ಶಾಲೆಯಲ್ಲಿ ಅಧ್ಯಕ್ಷರು ಮತ್ತು ಗುಮಾಸ್ತನೇ ಕಾರ್ಯ ನಿರ್ವಹಿಸುತ್ತಿರುವುದು ಸರ್ಕಾರಕ್ಕೆ ವಿಷಯ ತಿಳಿದಿದೆಯೇ?

ಆ) ಇವರು ಎಷ್ಟು ವರ್ಷಗಳಿಂದ ಈ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿರುವುದು? ಇದರಲ್ಲಿ ಯಾವ ಯಾವ ಅಧಿಕಾರಿಗಳು ಬಾಗವಹಿಸಿದ್ದಾರೆ ಹಾಗೂ ಸಹ ನಿರ್ದೇಶಕರು, ಸಾರ್ವಜನಿಕ

ಶಿಕ್ಷಣ ಇಲಾಖೆ, ಬೆಳಗಾವಿ ಹಾಗೂ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಚಿಕ್ಕೋಡಿ, ಈ ವಿಷಯವನ್ನು ಸರ್ಕಾರಕ್ಕೆ ಗಮನ ತಂದಿದ್ದಾರೆ ಹೇಗೆ?

ಇ) ಈ ವಿಷಯವು ಸರ್ಕಾರದ ಮಟ್ಟದಲ್ಲಿ ಇದ್ದರೆ, ಜಿಲ್ಲಾ ಮಟ್ಟದ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರ ಮೇಲೆ ಯಾವ ಯಾವ ಕ್ರಮ ಜರುಗಿಸಲಾಗಿದೆ.

ಈ) ಸರ್ಕಾರಕ್ಕೆ ಆರ್ಥಿಕ ಸ್ಥಿತಿಯಿಂದ ವಂಚನೆ ಮಾಡುತ್ತಿದ್ದ ಹಾಗೂ ಒಬ್ಬನೇ ಎರಡು ಹುದ್ದೆಗಳನ್ನು ಕಾರ್ಯ ನಿರ್ವಹಿಸಲು ಅನುಮತಿ ನೀಡಿದ ಬಗ್ಗೆ ಸರ್ಕಾರಿ ಅಧಿಕಾರಿಗಳೇ ಸಾಮೀಲಾಗಿ ಇರುತ್ತಾರೆ ಎಂಬುದು ಕಂಡು ಬರುತ್ತಿದೆಯಲ್ಲವೆ?

ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು) :

ಅ) ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ

ಆ) ಸರ್ಕಾರದ ಗಮನಕ್ಕೆ ತಂದಿರುವುದಿಲ್ಲ

ಇ) ಪ್ರಶ್ನೆ ಉದ್ಭವಿಸುವುದಿಲ್ಲ

ಈ) ಈ ಬಗ್ಗೆ ವರದಿ ಪಡೆದು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

ಹುಬ್ಬಳ್ಳಿ ಕಿಮ್ಸ್ ಆಸ್ಪತ್ರೆ ಅವ್ಯವಸ್ಥೆಗೆ ಕ್ರೀಯಾ ಯೋಜನೆ

1057 (1152) ಶ್ರೀ ವಿಶ್ವೇಶ್ವರ ಹೆಗ್ಗಡೆ ಕಾಗೇರಿ (ಅಂಕೋಲ): ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿಯ ಪ್ರತಿಷ್ಟಿತ ಕೆ.ಎಂ.ಸಿ. ಆಸ್ಪತ್ರೆಯಲ್ಲಿ ಸಮರ್ಪಕ ಸೇವೆ, ಉತ್ತಮ ವ್ಯವಸ್ಥೆ ಇಲ್ಲದಿರುವ ಸಂಗತಿ ಸರ್ಕಾರಕ್ಕೆ ತಿಳಿದಿದೆಯೆ?

ಆ) ತಿಳಿದಿದ್ದರೂ, ಸಹ ಸ್ವಾಯತ್ತ ಸಂಸ್ಥೆಯಾದ ಇದನ್ನು ಸುಧಾರಿಸಲು ಕ್ರಮ ಕೈಗೊಳ್ಳದಿರುವುದಕ್ಕೆ ಕಾರಣಗಳೇನು?

ಇ) ಈ ಆಸ್ಪತ್ರೆಯಲ್ಲಿ ವ್ಯಾಪಕ ಭ್ರಷ್ಟಾಚಾರವು ಔಷಧಿ ಖರೀದಿಯಲ್ಲಿ ನೇಮಕಾತಿಯಲ್ಲಿ ಅಕ್ರಮ ನಡೆದಿರುವುದರ ಬಗ್ಗೆ ಸರ್ಕಾರದ ನಿಲುವೇನು?

ಈ) ಇದರ ಎಲ್ಲಾ ಸುವ್ಯವಸ್ಥೆಗೆ ಸರ್ಕಾರ ಗಮನಹರಿಸಿರುವುದೆ ಹಾಗೂ ಯಾವ ಕ್ರಮ ಜರುಗಿಸಲಾಗುತ್ತದೆ?

ಉ) ಈ ಸ್ಥಿತಿಗೆ ಕಾರಣರಾರು, ಇವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗುವುದು?

ಡಾ॥ ಎ.ಬಿ. ಮಾಲಕರೆಡ್ಡಿ (ವೈದ್ಯಕೀಯ ಶಿಕ್ಷಣ ಸಚಿವರು) :

ಅ) ಕಿಮ್ಸ್ ಆಸ್ಪತ್ರೆಯಲ್ಲಿ ರೋಗಿಗಳಿಗೆ ಉತ್ತಮ ಸೇವೆ ನೀಡಲಾಗುತ್ತಿದೆ.

ಆ) ಐಸಿಯು, ಐಸಿಸಿಯು, ಡಯಾಲಿಸಿಸ್ ಘಟಕಗಳನ್ನು ಪ್ರಾರಂಭಿಸಲಾಗಿದೆ. ಡಯಾಗ್ನಸ್ಟಿಕ್ ಸೆಂಟರ್ ಮತ್ತು ಐಸೋಲೇಸನ್ ವಾರ್ಡ್‌ಗಳನ್ನು ನಿರ್ಮಿಸಲಾಗುತ್ತಿದೆ.